KACM710038732022

**1** ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.

ಉಪಸ್ಥಿತರು
ಶ್ರೀಮತಿ ಉರ್ಮಿಳ.ವಿ., ಬಿ.ಎ.ಎಲ್., ಎಲ್‌ಎಲ್‌ಬಿ.,
1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ.

ದಿನಾಂಕ ಃ **6** ನೇ ಮಾರ್ಚ್ **2026**

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ **2835/2022**

ಫಿರ್ಯಾದಿ ಃ ರಾಜ್ಯದ ಪರವಾಗಿ ಲಿಂಗದಹಳ್ಳಿ ಪೊಲೀಸರು

(ಪ್ರತಿನಿಧಿಸುವವರುಃ ಸಹಾಯಕ ಸರ್ಕಾರಿ ಅಭಿಯೋಜಕರು)

-ವಿರುದ್ಧ-

ಆರೋಪಿ/ತರುಃ

1) ತೇಜಸ್ ಬಿನ್ ಶೇಖರಪ್ಪ, 23 ವರ್ಷ, ವ್ಯವಸಾಯಗಾರರು,
2) ಗಿರೀಶ ಬಿನ್ ಹನುಮಂತಪ್ಪ, 23 ವರ್ಷ, ಕೂಲಿಕೆಲಸ,
3) ಮಂಜುನಾಥ ಬಿನ್ ರಾಜಣ್ಣ, 28 ವರ್ಷ, ಕೂಲಿಕೆಲಸ,

ಆ-1 ರಿಂದ 3 ವಾಸಃ ನಂದಿಹೊಸಳ್ಳಿ ಗ್ರಾಮ, ಲಿಂಗದಹಳ್ಳಿ ಹೋಬಳಿ, ತರೀಕೆರೆ ತಾಲ್ಲೂಕು.

4) ಗಗನ.ಟಿ.ಎಲ್. ಬಿನ್ ಲೋಕೇಶ, 21 ವರ್ಷ, ಚಾಲಕ ವೃತ್ತಿ, ವಾಸಃ ಅಂಬೇಡ್ಕರ್ ನಗರ, ಎಂ.ಜಿ.ರಸ್ತೆ, ತರೀಕೆರೆ.

(1 ನೇ ಆರೋಪಿ ಪರವಾಗಿಃ ಶ್ರೀ ಟಿ.ಆರ್.ಆರ್., ನ್ಯಾಯವಾದಿಗಳು.
2 ನೇ ಆರೋಪಿ ಪರವಾಗಿಃ ಶ್ರೀ ಹೆಚ್.ಎಸ್.ಎನ್., ನ್ಯಾಯವಾದಿಗಳು.
3, 4 ನೇ ಆರೋಪಿತರ ಪರವಾಗಿಃ ಶ್ರೀ ಎಸ್.ವಿ.ಎ., ನ್ಯಾಯವಾದಿಗಳು.)

| | | |
|---|---|---|
| 1 | ಅಪರಾಧ ನಡೆದ ದಿನಾಂಕ | 14.09.2021 |
| 2 | ಅಪರಾಧ ವರದಿ ಮಾಡಿದ ದಿನಾಂಕ | 15.09.2021 |
| 3 | ಆರೋಪಿತರನ್ನು ಬಂಧಿಸಿದ ದಿನಾಂಕ | - |

Visit **ecourts.gov.in** for updates or download mobile app "**eCourts Services**" from Android or iOS

KACM710038732022

| | | |
|---|---|---|
| 4 | ಪಿರ್ಯಾದಿಯ ಹೆಸರು | ಕಿರಣ್.ಆರ್ |
| 5 | ಸಾಕ್ಷಿ ವಿಚಾರಣೆ ಪ್ರಾರಂಭಿಸಿದ ದಿನಾಂಕ | 19.02.2026 |
| 6 | ಸಾಕ್ಷಿ ವಿಚಾರಣೆ ಮುಕ್ತಾಯವಾದ ದಿನಾಂಕ | 03.03.2026 |
| 7 | ಆರೋಪಿಸಲಾದ ಅಪರಾಧಗಳು | ಭಾ.ದ.ಸಂ.ಕಲಂ 506, 504, 324, 323, 341 ಸಹವಾಚಕ ಕಲಂ 34 |
| 8 | ನ್ಯಾಯಾಧೀಶರ ಅಭಿಪ್ರಾಯ | ಆರೋಪಿತರು ನಿರಪರಾಧಿಗಳು |

***

<u>ತೀರ್ಪು</u>

ಠಾಣಾಧಿಕಾರಿಗಳು, ಲಿಂಗದಹಳ್ಳಿ ಪೊಲೀಸ್ ಠಾಣೆ ಇವರು ಆರೋಪಿತರ ವಿರುದ್ಧ ಭಾರತೀಯ ದಂಡ ಸಂಹಿತೆ ಕಲಂ 506, 504, 324, 323 ಮತ್ತು 341 ಸಹವಾಚಕ ಕಲಂ 34 ರಡಿಯಲ್ಲಿನ ಶಿಕ್ಷಾರ್ಹ ಅಪರಾಧಕ್ಕಾಗಿ ದೋಷಾರೋಪಣಾ ಪಟ್ಟಿ ಸಲ್ಲಿಸಿರುತ್ತಾರೆ.

2. <u>ಈ ಪ್ರಕರಣದ ಸಂಕ್ಷಿಪ್ತ ಸಾರಾಂಶವೇನೆಂದರೆ:-</u>

ದಿನಾಂಕ 14.09.2021 ರಂದು ಸಂಜೆ 07.00 ಗಂಟೆ ಸಮಯದಲ್ಲಿ ಲಿಂಗದಹಳ್ಳಿ ಪೊಲೀಸ್ ಠಾಣಾ ಸರಹದ್ದಿನಲ್ಲಿ, ನಂದಿಹೊಸಳ್ಳಿ ಗ್ರಾಮದ ಗಣಪತಿ ವಿಸರ್ಜನೆ ಮಾಡುವ ವಿಚಾರದಲ್ಲಿ, ಲಿಂಗದಹಳ್ಳಿ-ತರೀಕೆರೆ ರಸ್ತೆಯಲ್ಲಿ ಭಗವತಿಕಟ್ಟೆ ಕೆರೆಯ ಹತ್ತಿರ ತರೀಕೆರೆ ಕಡೆಯಿಂದ ಕೆಎ:66/1726 ನೇ ಟಾಟಾ ಏಸ್ ವಾಹನದಲ್ಲಿ ಆರೋಪಿತರು ಸಮಾನ ಉದ್ದೇಶದಿಂದ ಬಂದು, ಚಾಸಾ-1 ಕಿರಣ್ ಹಾಗೂ ಚಾಸಾ-8 ರಿಂದ 12 ರವರನ್ನು ಅಡ್ಡಗಟ್ಟಿ ನಿಲ್ಲಿಸಿ, 1 ನೇ ಆರೋಪಿಯು ಚಾಸಾ-1 ರವರಿಗೆ ತನ್ನ ನೆಚ್ಚಿನ ನಟನಾದ ಸುದೀಪನ ಬಗ್ಗೆ ಮಾತನಾಡುತ್ತೀಯಾ ಸೂಳೆಮಗನೇ ಎಂದು ಬೈದು, ಚಾಸಾ-1 ರವರ ಕೊರಳಪಟ್ಟಿ ಹಿಡಿದು ಎಳೆದಾಡಿ, ತಾನು ತಂದಿದ್ದ ಒಂದು ಕಬ್ಬಿಣದ ಮಚ್ಚಿನಿಂದ ಹೊಡೆದಿದ್ದು, ಚಾಸಾ-1 ಕಿರಣನು ಕೈ ಅಡ್ಡ ಹಿಡಿದಿದ್ದರಿಂದ ಅವರ ಬಲದೇ ಕೈ ಹಸ್ತಕ್ಕೆ

Visit **ecourts.gov.in** for updates or download mobile app "**eCourts Services**" from Android or iOS

ಪೆಟ್ಟು ಬಿದ್ದು ಸಾಮಾನ್ಯ ಸ್ವರೂಪದ ರಕ್ತಗಾಯವಾಗಿದ್ದು, ಚಾಸಾ-8 ರಿಂದ 12 ರವರು ಜಗಳ ಬಿಡಿಸಲು ಹೋದಾಗ, 1 ರಿಂದ 4 ನೇ ಆರೋಪಿತರು ಚಾಸಾ-8 ರವರಿಗೆ ಕೈಯಿಂದ ಮೈಕೈಗೆ ಹೊಡೆದಿದ್ದು, 2 ನೇ ಆರೋಪಿಯು 1 ನೇ ಆರೋಪಿಯ ಕೈಯಲ್ಲಿದ್ದ ಮಚ್ಚನ್ನು ಕಿತ್ತುಕೊಂಡು ಚಾಸಾ-8 ರವರಿಗೆ ಹೊಡೆದಿದ್ದು, ಚಾಸಾ-8 ರವರು ಕೈ ಅಡ್ಡ ಹಿಡಿದಿದ್ದರಿಂದ ಅವರ ಎಡದೇ ಕೈಗೆ ಪೆಟ್ಟಾಗಿ ರಕ್ತಗಾಯವಾಗಿ ಸಾಮಾನ್ಯ ಸ್ವರೂಪದ ಗಾಯವಾಗಿದ್ದು, 2 ರಿಂದ 4 ನೇ ಆರೋಪಿತರು 1 ನೇ ಆರೋಪಿಯ ವಿಚಾರಕ್ಕೆ ಬಂದರೆ ಕೊಲೆ ಮಾಡುವುದಾಗಿ ಚಾಸಾ-1, 8 ರಿಂದ 12 ರವರಿಗೆ ಕೊಲೆ ಬೆದರಿಕೆ ಹಾಕಿರುತ್ತಾರೆ. ಆದ್ದರಿಂದ ಅವರ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತಾರೆ.

3. ಪ್ರಸ್ತುತ ಪ್ರಕರಣದಲ್ಲಿ ಪ್ರಕರಣವು ತನಿಖಾ ಹಂತದಲ್ಲಿರುವಾಗ 1 ಮತ್ತು 2 ನೇ ಆರೋಪಿತರು ವಕೀಲರ ಮೂಲಕ ನ್ಯಾಯಾಲಯದ ಹಾಜರಾಗಿ ಜಾಮೀನು ಅರ್ಜಿಯನ್ನು ಸಲ್ಲಿಸಿ ಜಾಮೀನಿನ ಮೇಲೆ ಬಿಡುಗಡೆ ಹೊಂದಿರುತ್ತಾರೆ. ತನಿಖಾಧಿಕಾರಿಯು ಆರೋಪಿತರ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿದ ನಂತರ ಸಂಜ್ಞೆಯನ್ನು ತೆಗೆದುಕೊಳ್ಳಲಾಯಿತು ಹಾಗೂ ಆರೋಪಿತರಿಗೆ ಸಮನ್ಸ್ ಹೊರಡಿಸಲಾಯಿತು. ಆರೋಪಿತರು ನ್ಯಾಯಾಲಯದ ಸಮನ್ಸ್ ಪಡೆದು ನ್ಯಾಯಾಲಯದ ಮುಂದೆ ಹಾಜರಾಗಿದ್ದು, 3 ಮತ್ತು 4 ನೇ ಆರೋಪಿತರು ವಕೀಲರ ಮೂಲಕ ಜಾಮೀನು ಅರ್ಜಿಯನ್ನು ಸಲ್ಲಿಸಿ ಜಾಮೀನಿನ ಮೇಲೆ ಬಿಡುಗಡೆ ಹೊಂದಿರುತ್ತಾರೆ. ಆರೋಪಿತರಿಗೆ ಅಭಿಯೋಜನೆಯ ಎಲ್ಲಾ ದಸ್ತಾವೇಜುಗಳನ್ನು ಭಾರತೀಯ ದಂಡ ಪಕ್ರಿಯಾ ಸಂಹಿತೆ ಕಲಂ 207 ರ ಅನುಸಾರ ಒದಗಿಸಲಾಗಿರುತ್ತದೆ. ಆರೋಪಿತರ ವಿರುದ್ಧ ಭಾರತೀಯ ದಂಡ ಸಂಹಿತೆ ಕಲಂ 341, 504, 324, 323 ಮತ್ತು 506 ಸಹವಾಚಕ ಕಲಂ 34 ರಡಿಯಲ್ಲಿನ ಶಿಕ್ಷಾರ್ಹ ಅಪರಾಧಕ್ಕಾಗಿ ಆರೋಪಣೆಯನ್ನು ರಚಿಸಲಾಯಿತು. ಆರೋಪಿತರು ಆರೋಪಣೆಯನ್ನು ನಿರಾಕರಿಸಿ ವಿಚಾರಣೆಯನ್ನು ಬಯಸಿರುತ್ತಾರೆ.

Visit **ecourts.gov.in** for updates or download mobile app "**eCourts Services**" from Android or iOS

4. ಅಭಿಯೋಜನೆಯು ದೋಷಾರೋಪಣಾ ಪಟ್ಟಿಯಲ್ಲಿ ತೋರಿಸಿರುವ 21 ಸಾಕ್ಷಿದಾರರ ಪೈಕಿ ಚಾಸಾ-1, 9, 8, 12, 11 ಮತ್ತು 10 ರವರು ಕ್ರಮವಾಗಿ ಅಸಾ-1 ರಿಂದ 6 ರಂತೆ ಸಾಕ್ಷ್ಯ ನುಡಿದಿರುತ್ತಾರೆ. ಅಸಾ-1 ರವರು ಪಿರ್ಯಾದುದಾರರು ಹಾಗೂ ಗಾಯಾಳು ಸಾಕ್ಷಿದಾರರಾಗಿ, ಅಸಾ-3 ರವರು ಪ್ರತ್ಯಕ್ಷ ಹಾಗೂ ಗಾಯಾಳು ಸಾಕ್ಷಿದಾರರಾಗಿ ಮತ್ತು ಅಸಾ-2, 4 ರಿಂದ 6 ರವರು ಪ್ರತ್ಯಕ್ಷ ಸಾಕ್ಷಿದಾರರಾಗಿ ಅಭಿಯೋಜನೆಗೆ ಪ್ರತಿಕೂಲ ಸಾಕ್ಷ್ಯ ನುಡಿದ ಕಾರಣ ಉಳಿದ ಸಾಕ್ಷಿದಾರರನ್ನು ವಿಚಾರಣೆಗೆ ಒಳಪಡಿಸುವುದರಿಂದ ಅಭಿಯೋಜನೆಗೆ ಯಾವುದೇ ರೀತಿಯ ಸಹಾಯ ಆಗುವುದಿಲ್ಲವೆಂದು ತಿಳಿದು ಸಹಾಯಕ ಸರ್ಕಾರಿ ಅಭಿಯೋಜಕರ ಕೋರಿಕೆಯನ್ನು ತಿರಸ್ಕರಿಸಿ ಉಳಿದ ಸಾಕ್ಷಿದಾರರ ವಿಚಾರಣೆಯನ್ನು ಕೈಬಿಡಲಾಗಿರುತ್ತದೆ. ಅಭಿಯೋಜನೆಯು 7 ದಾಖಲೆಗಳನ್ನು ಹಾಜರುಪಡಿಸಿ ಅದನ್ನು ನಿಪಿ-1 ರಿಂದ 7 ಎಂದು ಗುರ್ತಿಸಿಕೊಂಡಿರುತ್ತದೆ.

5. ಅಭಿಯೋಜನೆಯು ತನ್ನ ಪರವಾಗಿ ವಿಚಾರಣೆ ಮುಗಿಸಿದ ನಂತರ ಈ ಪ್ರಕರಣದಲ್ಲಿ ಆರೋಪಿತರ ವಿರುದ್ಧ ಸಾಕ್ಷ್ಯವು ಇಲ್ಲದೇ ಇರುವುದರಿಂದ ದಂಡ ಪ್ರಕ್ರಿಯಾ ಸಂಹಿತೆ ಕಲಂ 313 ರಡಿಯಲ್ಲಿನ ಆರೋಪಿತರ ಹೇಳಿಕೆಗಳನ್ನು ಕೈಬಿಡಲಾಗಿರುತ್ತದೆ.

6. ಆರೋಪಿತರು ದಂಡ ಪ್ರಕ್ರಿಯಾ ಸಂಹಿತೆ ಕಲಂ 437(ಎ) ನ್ನು ಪಾಲನೆ ಮಾಡಿರುತ್ತಾರೆ.

7. ಆರೋಪಿತರ ಪರ ಹಾಗೂ ಅಭಿಯೋಜಕರ ಪರ ವಾದ ಪ್ರತಿವಾದಗಳನ್ನು ಆಲಿಸಲಾಯಿತು.

8. ಕಡತದಲ್ಲಿ ಲಭ್ಯವಿರುವ ದಾಖಲೆಗಳನ್ನು ಪರಿಶೀಲಿಸಿದಾಗ ಈ ಕೆಳಕಂಡ ಅಂಶಗಳು ನ್ಯಾಯಾಲಯದ ಪರಿಗಣನೆಗೆ ಉದ್ಭವಿಸಿರುತ್ತದೆ ಃ

Visit **ecourts.gov.in** for updates or download mobile app "**eCourts Services**" from Android or iOS

**1)** ದಿನಾಂಕ 14.09.2021 ರಂದು ಸಂಜೆ 07.00 ಗಂಟೆ ಸಮಯದಲ್ಲಿ ಲಿಂಗದಹಳ್ಳಿ ಪೊಲೀಸ್ ಠಾಣಾ ಸರಹದ್ದಿನಲ್ಲಿ, ನಂದಿಹೊಸಳ್ಳಿ ಗ್ರಾಮದ ಗಣಪತಿ ವಿಸರ್ಜನೆ ಮಾಡುವ ವಿಚಾರದಲ್ಲಿ, ಲಿಂಗದಹಳ್ಳಿ-ತರೀಕೆರೆ ರಸ್ತೆಯಲ್ಲಿ ಭಗವತಿಕಟ್ಟೆ ಕೆರೆಯ ಹತ್ತಿರ ತರೀಕೆರೆ ಕಡೆಯಿಂದ ಕೆಎ:66/1726 ನೇ ಟಾಟಾ ಏಸ್ ವಾಹನದಲ್ಲಿ ಆರೋಪಿತರು ಸಮಾನ ಉದ್ದೇಶದಿಂದ ಬಂದು, ಚಾಸಾ-1 ಕಿರಣ್ ಹಾಗೂ ಚಾಸಾ-8 ರಿಂದ 12 ರವರನ್ನು ಅಡ್ಡಗಟ್ಟಿ ನಿಲ್ಲಿಸಿದ್ದು, ಆದ್ದರಿಂದ ಆರೋಪಿತರು ಭಾರತೀಯ ದಂಡ ಸಂಹಿತೆ ಕಲಂ 341 ಸಹವಾಚಕ ಕಲಂ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸೆಗಿರುತ್ತಾರೆ ಎಂದು ಅಭಿಯೋಜನೆಯವರು ನಿಸ್ಸಂಶಯಾತೀತವಾಗಿ ಸಾಬೀತು ಪಡಿಸಿರುತ್ತಾರೆಯೇ?

**2)** ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರು ಸಮಾನ ಉದ್ದೇಶದಿಂದ, 1 ನೇ ಆರೋಪಿಯು ಚಾಸಾ-1 ರವರಿಗೆ ತನ್ನ ನೆಚ್ಚಿನ ನಟನಾದ ಸುದೀಪನ ಬಗ್ಗೆ ಮಾತನಾಡುತ್ತೀಯಾ ಸೂಳೆಮಗನೇ ಎಂದು ಬೈದು ಅವಮಾನ ಮಾಡಿದ್ದು, ಆದ್ದರಿಂದ ಆರೋಪಿತರು ಭಾರತೀಯ ದಂಡ ಸಂಹಿತೆ ಕಲಂ 504 ಸಹವಾಚಕ ಕಲಂ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸೆಗಿರುತ್ತಾರೆ ಎಂದು ಅಭಿಯೋಜನೆಯವರು ನಿಸ್ಸಂಶಯಾತೀತವಾಗಿ ಸಾಬೀತು ಪಡಿಸಿರುತ್ತಾರೆಯೇ?

**3)** ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರು ಸಮಾನ ಉದ್ದೇಶದಿಂದ, 1 ನೇ ಆರೋಪಿಯು ಚಾಸಾ-1 ರವರ ಕೊರಳಪಟ್ಟಿ ಹಿಡಿದು ಎಳೆದಾಡಿ, ತಂದಿದ್ದ ಒಂದು ಕಬ್ಬಿಣದ ಮಚ್ಚಿನಿಂದ ಹೊಡೆದಿದ್ದು, ಚಾಸಾ-1 ಕಿರಣನು ಕೈ ಅಡ್ಡ ಹಿಡಿದಿದ್ದರಿಂದ ಅವರ ಬಲದೇ ಕೈ ಹಸ್ತಕ್ಕೆ ಪೆಟ್ಟು ಬಿದ್ದು ರಕ್ತಗಾಯವಾಗಿದ್ದು, ಬಿಡಿಸಲು ಬಂದ ಚಾಸಾ-8 ರವರಿಗೆ 2 ನೇ ಆರೋಪಿಯು 1 ನೇ ಆರೋಪಿಯ ಕೈಯಲ್ಲಿದ್ದ ಮಚ್ಚನ್ನು ಕಿತ್ತುಕೊಂಡು ಹೊಡೆದಿದ್ದು, ಚಾಸಾ-8 ರವರು ಕೈ ಅಡ್ಡ ಹಿಡಿದಿದ್ದರಿಂದ ಅವರ ಎಡದೇ ಕೈಗೆ ಪೆಟ್ಟಾಗಿ ರಕ್ತಗಾಯವಾಗಿ ಸಾಮಾನ್ಯ ಸ್ವರೂಪದ ಗಾಯವಾಗಿದ್ದು, ಆದ್ದರಿಂದ ಆರೋಪಿತರು ಭಾರತೀಯ ದಂಡ ಸಂಹಿತೆ ಕಲಂ 324 ಸಹವಾಚಕ ಕಲಂ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸೆಗಿರುತ್ತಾರೆ ಎಂದು ಅಭಿಯೋಜನೆಯವರು ನಿಸ್ಸಂಶಯಾತೀತವಾಗಿ ಸಾಬೀತು ಪಡಿಸಿರುತ್ತಾರೆಯೇ?

Visit **ecourts.gov.in** for updates or download mobile app "**eCourts Services**" from Android or iOS

4) ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರು ಸಮಾನ ಉದ್ದೇಶದಿಂದ, ಬಿಡಿಸಲು ಬಂದ ಚಾಸಾ-8 ರವರಿಗೆ ಕೈಯಿಂದ ಮೈಕೈಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯಗಳನ್ನು ಮಾಡಿದ್ದು, ಆದ್ದರಿಂದ ಆರೋಪಿತರು ಭಾರತೀಯ ದಂಡ ಸಂಹಿತೆ ಕಲಂ 323 ಸಹವಾಚಕ ಕಲಂ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿರುತ್ತಾರೆ ಎಂದು ಅಭಿಯೋಜನೆಯವರು ನಿಸ್ಸಂಶಯಾತೀತವಾಗಿ ಸಾಬೀತು ಪಡಿಸಿರುತ್ತಾರೆಯೇ?

5) ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರು ಸಮಾನ ಉದ್ದೇಶದಿಂದ, 2 ರಿಂದ 4 ನೇ ಆರೋಪಿತರು 1 ನೇ ಆರೋಪಿಯ ವಿಚಾರಕ್ಕೆ ಬಂದರೆ ಕೊಲೆ ಮಾಡುವುದಾಗಿ ಚಾಸಾ-1, 8 ರಿಂದ 12 ರವರಿಗೆ ಕೊಲೆ ಬೆದರಿಕೆ ಹಾಕಿದ್ದು, ಆದ್ದರಿಂದ ಆರೋಪಿತರು ಭಾರತೀಯ ದಂಡ ಸಂಹಿತೆ ಕಲಂ 506 ಸಹವಾಚಕ ಕಲಂ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿರುತ್ತಾರೆ ಎಂದು ಅಭಿಯೋಜನೆಯವರು ನಿಸ್ಸಂಶಯಾತೀತವಾಗಿ ಸಾಬೀತು ಪಡಿಸಿರುತ್ತಾರೆಯೇ?

6) ಹಾಗಿದ್ದರೆ ಯಾವ ಆಜ್ಞೆ?

9. ಮೇಲ್ಕಂಡ ಅಂಶಗಳಿಗೆ ನನ್ನ ಉತ್ತರ ಈ ಕೆಳಕಂಡಂತೆ ಇರುತ್ತದೆ ಃ

ಅಂಶ-1 ಃ ನಕಾರಾತ್ಮಕವಾಗಿ,

ಅಂಶ-2 ಃ ನಕಾರಾತ್ಮಕವಾಗಿ,

ಅಂಶ-3 ಃ ನಕಾರಾತ್ಮಕವಾಗಿ,

ಅಂಶ-4 ಃ ನಕಾರಾತ್ಮಕವಾಗಿ,

ಅಂಶ-5 ಃ ನಕಾರಾತ್ಮಕವಾಗಿ,

ಅಂಶ-6 ಃ ಅಂತಿಮ ಆದೇಶದಂತೆ,

-ಃ ಕಾ ರ ಣ ಗ ಳು ಃ-

10. ಅಂಶ**-1** ರಿಂದ **5** ಃ ಈ ಎಲ್ಲಾ ಅಂಶಗಳು ಒಂದಕ್ಕೊಂದು ಪೂರಕವಾಗಿರುವ ಕಾರಣ ಎಲ್ಲಾ ಅಂಶಗಳನ್ನು ಒಟ್ಟಾಗಿ ಚರ್ಚೆಗೆ ತೆಗೆದುಕೊಳ್ಳಲಾಗಿದೆ. ಅಭಿಯೋಜನೆಯು

ದಿನಾಂಕ 14.09.2021 ರಂದು ಸಂಜೆ 07.00 ಗಂಟೆ ಸಮಯದಲ್ಲಿ ಲಿಂಗದಹಳ್ಳಿ ಪೊಲೀಸ್ ಠಾಣಾ ಸರಹದ್ದಿನಲ್ಲಿ, ನಂದಿಹೊಸಳ್ಳಿ ಗ್ರಾಮದ ಗಣಪತಿ ವಿಸರ್ಜನೆ ಮಾಡುವ ವಿಚಾರದಲ್ಲಿ, ಲಿಂಗದಹಳ್ಳಿ-ತರೀಕೆರೆ ರಸ್ತೆಯಲ್ಲಿ ಭಗವತಿಕಟ್ಟೆ ಕೆರೆಯ ಹತ್ತಿರ ತರೀಕೆರೆ ಕಡೆಯಿಂದ ಕೆಎ66/1726 ನೇ ಟಾಟಾ ಏಸ್ ವಾಹನದಲ್ಲಿ ಆರೋಪಿತರು ಸಮಾನ ಉದ್ದೇಶದಿಂದ ಬಂದು, ಚಾಸಾ-1 ಕಿರಣ್ ಹಾಗೂ ಚಾಸಾ-8 ರಿಂದ 12 ರವರನ್ನು ಅಡ್ಡಗಟ್ಟಿ ನಿಲ್ಲಿಸಿ, 1 ನೇ ಆರೋಪಿಯು ಚಾಸಾ-1 ರವರಿಗೆ ತನ್ನ ನೆಚ್ಚಿನ ನಟನಾದ ಸುದೀಪನ ಬಗ್ಗೆ ಮಾತನಾಡುತ್ತೀಯಾ ಸೂಳೆಮಗನೇ ಎಂದು ಬೈದು, ಚಾಸಾ-1 ರವರ ಕೊರಳಪಟ್ಟಿ ಹಿಡಿದು ಎಳೆದಾಡಿ, ತಾನು ತಂದಿದ್ದ ಒಂದು ಕಬ್ಬಿಣದ ಮಚ್ಚಿನಿಂದ ಹೊಡೆದಿದ್ದು, ಚಾಸಾ-1 ಕಿರಣನು ಕೈ ಅಡ್ಡ ಹಿಡಿದಿದ್ದರಿಂದ ಅವರ ಬಲದೇ ಕೈ ಹಸ್ತಕ್ಕೆ ಪೆಟ್ಟು ಬಿದ್ದು ಸಾಮಾನ್ಯ ಸ್ವರೂಪದ ರಕ್ತಗಾಯವಾಗಿದ್ದು, ಚಾಸಾ-8 ರಿಂದ 12 ರವರು ಜಗಳ ಬಿಡಿಸಲು ಹೋದಾಗ, 1 ರಿಂದ 4 ನೇ ಆರೋಪಿತರು ಚಾಸಾ-8 ರವರಿಗೆ ಕೈಯಿಂದ ಮೈಕೈಗೆ ಹೊಡೆದಿದ್ದು, 2 ನೇ ಆರೋಪಿಯು 1 ನೇ ಆರೋಪಿಯ ಕೈಯಲ್ಲಿದ್ದ ಮಚ್ಚನ್ನು ಕಿತ್ತುಕೊಂಡು ಚಾಸಾ-8 ರವರಿಗೆ ಹೊಡೆದಿದ್ದು, ಚಾಸಾ-8 ರವರು ಕೈ ಅಡ್ಡ ಹಿಡಿದಿದ್ದರಿಂದ ಅವರ ಎಡದೇ ಕೈಗೆ ಪೆಟ್ಟಾಗಿ ರಕ್ತಗಾಯವಾಗಿ ಸಾಮಾನ್ಯ ಸ್ವರೂಪದ ಗಾಯವಾಗಿದ್ದು, 2 ರಿಂದ 4 ನೇ ಆರೋಪಿತರು 1 ನೇ ಆರೋಪಿಯ ವಿಚಾರಕ್ಕೆ ಬಂದರೆ ಕೊಲೆ ಮಾಡುವುದಾಗಿ ಚಾಸಾ-1, 8 ರಿಂದ 12 ರವರಿಗೆ ಕೊಲೆ ಬೆದರಿಕೆ ಹಾಕಿರುತ್ತಾರೆ ಎಂಬುದನ್ನು ಸಂಶಯಾತೀತವಾಗಿ ಸಾಬೀತು ಪಡಿಸಬೇಕಾಗಿರುತ್ತದೆ.

11. ಚಾಸಾ-1/ಅಸಾ-1 ರವರು ಈ ಪ್ರಕರಣದ ಪಿರ್ಯಾದುದಾರರು ಮತ್ತು ಗಾಯಾಳು ಸಾಕ್ಷಿಯಾಗಿದ್ದು, ತಮ್ಮ ಸಾಕ್ಷ್ಯ ಮುಖ್ಯ ವಿಚಾರಣೆಯಲ್ಲಿ ಆರೋಪಿತರು ತಮಗೆ ಪರಿಚಯಸ್ಥರು, ಆರೋಪಿತರು ತನಗೆ ಯಾವುದೇ ಅವಾಚ್ಯ ಶಬ್ದಗಳಿಂದ ಬೈದಿರುವುದಿಲ್ಲ, ತನಗೂ ಹಾಗೂ ಚಾಸಾ-8 ರವರಿಗೆ ಯಾವುದೇ ರೀತಿಯ ಹಲ್ಲೆ ಮಾಡಿರುವುದಿಲ್ಲ, 2 ರಿಂದ 4 ನೇ ಆರೋಪಿತರು ತನಗೆ, ಚಾಸಾ-8 ರಿಂದ 12 ರವರಿಗೆ

ಯಾವುದೇ ಕೊಲೆ ಬೆದರಿಕೆ ಹಾಕಿರುವುದಿಲ್ಲ, ತಾನು ಈ ಪ್ರಕರಣದ ಸಂಬಂಧ ಯಾವುದೇ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ಪಡೆದುಕೊಂಡಿರುವುದಿಲ್ಲ, ಈ ಪ್ರಕರಣದ ಸಂಬಂಧ ಬೇರೆ ಏನೂ ಗೊತ್ತಿರುವುದಿಲ್ಲ ಎಂದು ನುಡಿದು, ಪಿರ್ಯಾದಿನಲ್ಲಿರುವ ತನ್ನ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಿದ್ದು ಹಾಗೂ ನಿಪಿ-2 ಛಾಯಚಿತ್ರದಲ್ಲಿ ತಮ್ಮ ಇರುವಿಕೆಯನ್ನು ಗುರುತಿಸಿರುತ್ತಾರೆ. ಅಸಾ-1 ರವರನ್ನು ಪ್ರತಿಕೂಲ ಸಾಕ್ಷಿದಾರರು ಎಂದು ಪರಿಗಣಿಸಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ನ್ಯಾಯಾಲಯದ ಅನುಮತಿ ಮೇರೆಗೆ ಪಾಟೀ ಸವಾಲು ಮಾಡಿದ್ದು, ಪಾಟೀ ಸವಾಲಿನಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರ ಎಲ್ಲಾ ಸಲಹೆಗಳನ್ನು ಅಲ್ಲಗೆಳೆದಿರುತ್ತಾರೆ. ಅಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ ತಾನು ಮತ್ತು ಆರೋಪಿತರು ಈ ಪ್ರಕರಣವನ್ನು ರಾಜಿ ಮಾಡಿಕೊಂಡಿದ್ದೇವೆ ಎಂದರೆ ಸರಿ ಎಂದು ನುಡಿದಿರುತ್ತಾರೆ. ಆ ಕಾರಣ ಅಸಾ-1 ರವರ ಸಾಕ್ಷ್ಯ ಅಭಿಯೋಜನೆಗೆ ಸಹಾಯಕವಾಗುವುದಿಲ್ಲ.

12. ಚಾಸಾ-9/ಅಸಾ-2, ಚಾಸಾ-12/ಅಸಾ-4, ಚಾಸಾ-11/ಅಸಾ-5 ಮತ್ತು ಚಾಸಾ-10/ಅಸಾ-6 ರವರು ಈ ಪ್ರಕರಣದ ಪ್ರತ್ಯಕ್ಷ ಸಾಕ್ಷಿದಾರರಾಗಿದ್ದು, ಅಸಾ-2, 4 ರಿಂದ 6 ರವರು ತಮ್ಮ ಸಾಕ್ಷ್ಯ ಮುಖ್ಯ ವಿಚಾರಣೆಯಲ್ಲಿ ಆರೋಪಿತರು ತಮಗೆ ಪರಿಚಯಸ್ಥರು, ಆರೋಪಿತರು ಚಾಸಾ-1 ರವರಿಗೆ ಯಾವುದೇ ಅವಾಚ್ಯ ಶಬ್ದಗಳಿಂದ ಬೈದಿರುವುದಿಲ್ಲ, ಆರೋಪಿತರು ಚಾಸಾ-1 ಮತ್ತು 8 ರವರಿಗೆ ಯಾವುದೇ ರೀತಿಯ ಹಲ್ಲೆ ಮಾಡಿರುವುದಿಲ್ಲ, 2 ರಿಂದ 4 ನೇ ಆರೋಪಿತರು ತಮಗೆ ಯಾವುದೇ ಕೊಲೆ ಬೆದರಿಕೆ ಹಾಕಿರುವುದಿಲ್ಲ, ಈ ಪ್ರಕರಣದ ಸಂಬಂಧ ಬೇರೆ ಏನೂ ಗೊತ್ತಿರುವುದಿಲ್ಲ ಎಂದು ನುಡಿದಿರುತ್ತಾರೆ. ಅಸಾ-2, 4 ರಿಂದ 6 ರವರನ್ನು ಪ್ರತಿಕೂಲ ಸಾಕ್ಷಿದಾರರು ಎಂದು ಪರಿಗಣಿಸಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ನ್ಯಾಯಾಲಯದ ಅನುಮತಿ ಮೇರೆಗೆ ಪಾಟೀ ಸವಾಲು ಮಾಡಿದ್ದು, ಪಾಟೀ ಸವಾಲಿನಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರ ಎಲ್ಲಾ ಸಲಹೆಗಳನ್ನು ಅಲ್ಲಗೆಳೆದು, ತಾವು ಪೊಲೀಸರ ಮುಂದೆ ಕ್ರಮವಾಗಿ ನಿಪಿ-3, 5 ರಿಂದ 7 ರಂತೆ

ಹೇಳಿಕೆಗಳನ್ನು ನೀಡಿರುತ್ತೇವೆಂದರೆ ಸರಿಯಲ್ಲ, ತಾವು ಮತ್ತು ಆರೋಪಿತರು ಈ ಪ್ರಕರಣವನ್ನು ರಾಜಿ ಮಾಡಿಕೊಂಡಿದ್ದೇವೆ ಎಂದರೆ ಸರಿ ಎಂದು ನುಡಿದಿರುತ್ತಾರೆ. ಆ ಕಾರಣ ಅಸಾ-2, 4 ರಿಂದ 6 ರವರ ಸಾಕ್ಷ್ಯ ಅಭಿಯೋಜನೆಗೆ ಸಹಾಯಕವಾಗುವುದಿಲ್ಲ.

13. ಚಾಸಾ-8/ಅಸಾ-3 ರವರು ಪ್ರಕರಣದ ಗಾಯಾಳು ಮತ್ತು ಪ್ರತ್ಯಕ್ಷ ಸಾಕ್ಷಿದಾರರಾಗಿದ್ದು, ಅಸಾ-3 ರವರು ತಮ್ಮ ಸಾಕ್ಷ್ಯ ಮುಖ್ಯ ವಿಚಾರಣೆಯಲ್ಲಿ ಆರೋಪಿತರು ತಮಗೆ ಪರಿಚಯಸ್ಥರು, ಆರೋಪಿತರು ಚಾಸಾ-1 ರವರಿಗೆ ಯಾವುದೇ ಅವಾಚ್ಯ ಶಬ್ದಗಳಿಂದ ಬೈದಿರುವುದಿಲ್ಲ, ಆರೋಪಿತರು ಚಾಸಾ-1 ಮತ್ತು ತನಗೆ ಯಾವುದೇ ರೀತಿಯ ಹಲ್ಲೆ ಮಾಡಿರುವುದಿಲ್ಲ, 2 ರಿಂದ 4 ನೇ ಆರೋಪಿತರು ತನಗೆ ಹಾಗೂ ಚಾಸಾ-1, 9 ರಿಂದ 12 ರವರಿಗೆ ಯಾವುದೇ ಕೊಲೆ ಬೆದರಿಕೆ ಹಾಕಿರುವುದಿಲ್ಲ, ಈ ಪ್ರಕರಣದ ಸಂಬಂಧ ಬೇರೆ ಏನೂ ಗೊತ್ತಿರುವುದಿಲ್ಲ ಎಂದು ನುಡಿದಿರುತ್ತಾರೆ. ಅಸಾ-3 ರವರನ್ನು ಪ್ರತಿಕೂಲ ಸಾಕ್ಷಿದಾರರು ಎಂದು ಪರಿಗಣಿಸಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ನ್ಯಾಯಾಲಯದ ಅನುಮತಿ ಮೇರೆಗೆ ಪಾಟೀ ಸವಾಲು ಮಾಡಿದ್ದು, ಪಾಟೀ ಸವಾಲಿನಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರ ಎಲ್ಲಾ ಸಲಹೆಗಳನ್ನು ಅಲ್ಲಗೆಳೆದು, ತಾನು ಪೊಲೀಸರ ಮುಂದೆ ನಿಪಿ-4 ರಂತೆ ಹೇಳಿಕೆಯನ್ನು ನೀಡಿರುತ್ತೇನೆಂದರೆ ಸರಿಯಲ್ಲ, ತಾವು ಮತ್ತು ಆರೋಪಿತರು ಈ ಪ್ರಕರಣವನ್ನು ರಾಜಿ ಮಾಡಿಕೊಂಡಿದ್ದೇವೆ ಎಂದರೆ ಸರಿ ಎಂದು ನುಡಿದಿರುತ್ತಾರೆ. ಆ ಕಾರಣ ಅಸಾ-3 ರವರ ಸಾಕ್ಷ್ಯ ಅಭಿಯೋಜನೆಗೆ ಸಹಾಯಕವಾಗುವುದಿಲ್ಲ.

14. ಪ್ರಸ್ತುತ ಪ್ರಕರಣದಲ್ಲಿ ಅಸಾ-1 ರವರು ಪಿರ್ಯಾದುದಾರರು ಹಾಗೂ ಗಾಯಾಳು ಸಾಕ್ಷಿದಾರರಾಗಿ, ಅಸಾ-3 ರವರು ಪ್ರತ್ಯಕ್ಷ ಹಾಗೂ ಗಾಯಾಳು ಸಾಕ್ಷಿದಾರರಾಗಿ ಮತ್ತು ಅಸಾ-2, 4 ರಿಂದ 6 ರವರು ಪ್ರತ್ಯಕ್ಷ ಸಾಕ್ಷಿದಾರರಾಗಿ ಅಭಿಯೋಜನೆಗೆ ಪ್ರತಿಕೂಲ ಸಾಕ್ಷ್ಯ ನುಡಿದ ಕಾರಣ ಉಳಿದ ಸಾಕ್ಷಿದಾರರನ್ನು ವಿಚಾರಣೆಗೆ ಒಳಪಡಿಸುವುದರಿಂದ

Visit **ecourts.gov.in** for updates or download mobile app “**eCourts Services**” from Android or iOS

ಅಭಿಯೋಜನೆಗೆ ಯಾವುದೇ ರೀತಿಯ ಸಹಾಯ ಆಗುವುದಿಲ್ಲವೆಂದು ತಿಳಿದು ಸಹಾಯಕ ಸರ್ಕಾರಿ ಅಭಿಯೋಜಕರ ಕೋರಿಕೆಯನ್ನು ತಿರಸ್ಕರಿಸಿ ಉಳಿದ ಸಾಕ್ಷಿದಾರರ ವಿಚಾರಣೆಯನ್ನು ಕೈಬಿಡಲಾಗಿರುತ್ತದೆ.

15. ಅಭಿಯೋಜಕರು ಈ ಪ್ರಕರಣದ ಅಸಾ-1 ರಿಂದ 6 ರವರು ನ್ಯಾಯಾಲಯದ ಹೊರಗೆ ರಾಜಿ ಮಾಡಿಕೊಂಡಿದ್ದು, ಆರೋಪಿತರಿಗೆ ಶಿಕ್ಷೆ ತಪ್ಪಿಸುವ ಸಲುವಾಗಿ ಅಸಾ-1 ರಿಂದ 6 ರವರು ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿರುವುದರಿಂದ ಆರೋಪಿತರನ್ನು ಸೂಕ್ತ ರೀತಿಯಲ್ಲಿ ಶಿಕ್ಷಿಸಬೇಕೆಂದು ತಮ್ಮ ವಾದ ಮಂಡಿಸಿರುತ್ತಾರೆ. ಆರೋಪಿತರ ಪರ ವಕೀಲರು ತಮ್ಮ ವಾದದಲ್ಲಿ ಪ್ರಕರಣದಲ್ಲಿ ಅಸಾ-1 ರಿಂದ 6 ರವರೇ ತಮ್ಮ ಸಾಕ್ಷ್ಯದಲ್ಲಿ ತಮಗೆ ಆರೋಪಿತರಿಂದ ಯಾವುದೇ ತೊಂದರೆ ಆಗಿರುವುದಿಲ್ಲವೆಂದು ನುಡಿದಿರುವ ಕಾರಣ ಆರೋಪಿತರನ್ನು ದೋಷಮುಕ್ತಗೊಳಿಸಬೇಕೆಂದು ವಾದ ಮಂಡಿಸಿರುತ್ತಾರೆ.

16. ಪ್ರಸ್ತುತ ಪ್ರಕರಣದಲ್ಲಿ ಅಭಿಯೋಜನೆಯು ಹಾಜರುಪಡಿಸಿದ ಎಲ್ಲಾ ಮೌಖಿಕ ಹಾಗೂ ದಾಖಲಾತಿ ಸಾಕ್ಷ್ಯವನ್ನು ಕೂಲಂಕುಷವಾಗಿ ಪರಿಶೀಲಿಸಿದಾಗ, ಅಸಾ-1 ರವರು ಪಿರ್ಯಾದುದಾರರು ಹಾಗೂ ಗಾಯಾಳು ಸಾಕ್ಷಿದಾರರಾಗಿ, ಅಸಾ-3 ರವರು ಪ್ರತ್ಯಕ್ಷ ಹಾಗೂ ಗಾಯಾಳು ಸಾಕ್ಷಿದಾರರಾಗಿ ಮತ್ತು ಅಸಾ-2, 4 ರಿಂದ 6 ರವರು ಪ್ರತ್ಯಕ್ಷ ಸಾಕ್ಷಿದಾರರಾಗಿ ಪ್ರಕರಣದಲ್ಲಿ ಪ್ರತಿಕೂಲ ಸಾಕ್ಷ್ಯ ನುಡಿದಿರುತ್ತಾರೆ ಹಾಗೂ ಆರೋಪಿತರೊಡನೆ ರಾಜಿ ಮಾಡಿಕೊಂಡಿರುವುದಾಗಿ ನುಡಿದಿರುತ್ತಾರೆ. ಆದುದರಿಂದ ಅಭಿಯೋಜನೆಯು ಆರೋಪಿತರ ವಿರುದ್ಧ ದೂಷಿಸಲಾದ ಭಾರತೀಯ ದಂಡ ಸಂಹಿತೆ ಕಲಂ 341, 504, 324, 323 ಮತ್ತು 506 ಸಹವಾಚಕ ಕಲಂ 34 ರಡಿಯಲ್ಲಿನ ಒಳಾಂಶಗಳನ್ನು ಸಂಶಯಾತೀತವಾಗಿ ರುಜುವಾತುಪಡಿಸಲು ವಿಫಲವಾಗಿರುವುದರಿಂದ ಸಂಶಯದ ಲಾಭವನ್ನು ಆರೋಪಿತರಿಗೆ ನೀಡಿ, ಆರೋಪಿತರು ಬಿಡುಗಡೆಗೆ ಅರ್ಹರೆಂದು ಅಭಿಪ್ರಾಯಪಟ್ಟು ಅಂಶ-1 ರಿಂದ 5 ಕ್ಕೆ ನಕಾರಾತ್ಮಕವಾಗಿ ಉತ್ತರಿಸುತ್ತಿದ್ದೇನೆ.

Visit **ecourts.gov.in** for updates or download mobile app "**eCourts Services**" from Android or iOS

KACM710038732022

17. <u>ಅಂಶ - **6** ಃ</u> ಮೇಲೆ ಚರ್ಚಿಸಿದ ಎಲ್ಲಾ ಕಾರಣಗಳಿಂದ ಈ ಕೆಳಗಿನಂತೆ ಆದೇಶಿಸಲಾಗಿದೆ ಃ

<u>**-**ಃ ಆದೇಶ ಃ**-**</u>

ದಂಡ ಪ್ರಕ್ರಿಯಾ ಸಂಹಿತೆ ಕಲಂ 248(1) ರಡಿಯಲ್ಲಿ ದತ್ತವಾದ ಅಧಿಕಾರವನ್ನು ಚಲಾಯಿಸಿ ಆರೋಪಿತರನ್ನು ಭಾರತೀಯ ದಂಡ ಸಂಹಿತೆ ಕಲಂ 341 504, 324, 323 ಮತ್ತು 506 ಸಹವಾಚಕ ಕಲಂ 34 ರಡಿಯಲ್ಲಿನ ಆರೋಪಗಳಿಂದ ದೋಷಮುಕ್ತಗೊಳಿಸಲಾಗಿದೆ.

ಆರೋಪಿತರ ವೈಯುಕ್ತಿಕ ಬಾಂಡ್ ಹಾಗೂ ಜಾಮೀನು ಬಾಂಡ್ ಈ ಆದೇಶವಾದ ದಿನದಿಂದ ರದ್ದುಗೊಳಿಸಲಾಗಿದೆ.

ಆರೋಪಿತರು ದಂಡ ಪ್ರಕ್ರಿಯಾ ಸಂಹಿತೆ ಕಲಂ 437(ಎ) ರಡಿಯಲ್ಲಿ ಸಲ್ಲಿಸಿದ ವೈಯುಕ್ತಿಕ ಬಾಂಡ್ ಹಾಗೂ ಜಾಮೀನು ಬಾಂಡ್ ಈ ಆದೇಶವಾದ ದಿನದಿಂದ ಆರು ತಿಂಗಳುವರೆಗೆ ಊರ್ಜಿತವಾಗಿರುತ್ತದೆ.

ಈ ಪ್ರಕರಣದಲ್ಲಿ ಪಿ.ಎಫ್ ಸಂಖ್ಯೆ 41/2022 - ಪಿ.ಆರ್. ಸಂಖ್ಯೆ 9/2024 ರಲ್ಲಿ ಅಮಾನತ್ತುಪಡಿಸಿಕೊಂಡಿರುವ ಸುಮಾರು ಒಂದೂವರೆ ಅಡಿ ಉದ್ದದ ಒಂದು ಕುಡುಗೋಲಿನಂತಿರುವ ಕಬ್ಬಿಣದ ಕತ್ತಿಯನ್ನು ಮೇಲ್ಮನವಿ ಅವಧಿ ಮುಗಿದ ನಂತರ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವಂತೆ ಈ ಮೂಲಕ ಕಛೇರಿಗೆ ಆದೇಶಿಸಲಾಗಿದೆ.

(ಈ ತೀರ್ಪನ್ನು ಶೀಘ್ರಲಿಪಿಗಾರರಿಗೆ ಗಣಕಯಂತ್ರದ ಮೂಲಕ ನೇರ ಉಕ್ತಲೇಖನ ಕೊಟ್ಟು, ಅವರು ಬೆರಳಚ್ಚು ಮಾಡಿದ ನಂತರ, ಓದಿ ತಿದ್ದುಪಡಿ ಮಾಡಿ, ತೆರೆದ ನ್ಯಾಯಾಲಯದಲ್ಲಿ ದಿನಾಂಕ 6 ನೇ ಮಾರ್ಚ್ 2026 ರಂದು ಘೋಷಿಸಲಾಯಿತು)

URMILA V

Digitally signed by URMILA V
Date: 2026.03.06 15:42:43 +0530

ಸಹಿ

**(**ಊರ್ಮಿಳ**.**ವಿ**.)**
**1** ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ**.**ದ**.**ನ್ಯಾ**.**ದಂ**.,** ತರೀಕೆರೆ**.**

Visit **ecourts.gov.in** for updates or download mobile app "**eCourts Services**" from Android or iOS

KACM710038732022

<u>ಅನುಬಂಧ</u>

<u>ಅಭಿಯೋಜನೆಯ ಪರ ವಿಚಾರಣೆ ಮಾಡಲ್ಪಟ್ಟ ಸಾಕ್ಷಿಗಳ ಪಟ್ಟಿ</u> ಃ-

| | | |
|---|---|---|
| ಅಸಾ-1 | ಃ | ಕಿರಣ್ |
| ಅಸಾ-2 | ಃ | ಪ್ರದೀಪ |
| ಅಸಾ-3 | ಃ | ಪಾತಲಿಂಗ |
| ಅಸಾ-4 | ಃ | ಮಂಜುನಾಥ.ಎಂ. |
| ಅಸಾ-5 | ಃ | ಮಧು |
| ಅಸಾ-6 | ಃ | ಮಂಜುನಾಥ.ವಿ. |

<u>ಅಭಿಯೋಜನೆಯ ಪರ ಗುರುತು ಮಾಡಲ್ಪಟ್ಟ ದಾಖಲಾತಿಗಳು</u> ಃ-

| | | |
|---|---|---|
| ನಿಪಿ-1 | ಃ | ದೂರು |
| ನಿಪಿ-2 | ಃ | ಛಾಯಚಿತ್ರ |
| ನಿಪಿ-3 | ಃ | ಅಸಾ-2 ರವರ ಹೇಳಿಕೆ |
| ನಿಪಿ-4 | ಃ | ಅಸಾ-3 ರವರ ಹೇಳಿಕೆ |
| ನಿಪಿ-5 | ಃ | ಅಸಾ-4 ರವರ ಹೇಳಿಕೆ |
| ನಿಪಿ-6 | ಃ | ಅಸಾ-5 ರವರ ಹೇಳಿಕೆ |
| ನಿಪಿ-7 | ಃ | ಅಸಾ-6 ರವರ ಹೇಳಿಕೆ |

<u>ಅಭಿಯೋಜನೆಯ ಪರ ಗುರುತು ಮಾಡಲ್ಪಟ್ಟ ಮುದ್ದೆಮಾಲುಗಳು</u> ಃ-

- ಇಲ್ಲ -

<u>ಆರೋಪಿತರ ಪರ ವಿಚಾರಣೆ ಮಾಡಲ್ಪಟ್ಟ ಸಾಕ್ಷಿಗಳ ಪಟ್ಟಿ ಃ-</u>

- ಇಲ್ಲ -

<u>ಆರೋಪಿತರ ಪರ ಗುರುತು ಮಾಡಲ್ಪಟ್ಟ ದಾಖಲಾತಿಗಳು</u> ಃ-

- ಇಲ್ಲ -

URMILA V

Digitally signed by URMILA V
Date: 2026.03.06 15:42:32 +0530

ಸಹಿ
**1** ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ.

Visit **ecourts.gov.in** for updates or download mobile app "**eCourts Services**" from Android or iOS